Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 24-11-2022

**ಪತ್ರಿಕಾ ಪ್ರಕಟಣೆ:**

# ಫಲಿತಾಂಶ ಆಧಾರಿತ ಶಿಕ್ಷಣದ ಕುರಿತು ಉಪನ್ಯಾಸ ಕಾರ್ಯಕ್ರಮ

ಕೆ. ಎಲ್. ಎಸ್. ವಿ. ಡಿ. ಐ. ಟಿ. ಹಳಿಯಾಳದಲ್ಲಿ ಹೊಸ ಶಿಕ್ಷಣ ನೀತಿ ಮತ್ತು ಫಲಿತಾಂಶ ಆಧಾರಿತ ಶಿಕ್ಷಣ ಎಂಬ ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ನವೆಂಬರ್ 23ರಂದು ಆಯೋಜಿಸಲಾಗಿತ್ತು. ಧಾರವಾಡದ ಎಸ್. ಡಿ. ಎಂ. ತಾಂತ್ರಿಕ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ನಿರ್ವಹಿಸುತ್ತಿರುವ ಡಾ. ಉಮಾಕಾಂತ ಕುಲಕರ್ಣಿ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದರು. ಶಿಕ್ಷಣದ ಹಂತಗಳಲ್ಲಿ ಫಲಿತಾಂಶ ಆಧಾರಿತ ವಿಧಾನವನ್ನು ಅಳವಡಿಸಿಕೊಳ್ಳುವುದರಿಂದ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ ಸಾಧ್ಯ ಎಂದು ಹೇಳಿದರು. ವಿದ್ಯಾರ್ಥಿಗಳು ಉತ್ತಮ ಫಲಿತಾಂಶವನ್ನು ಹೊಂದಲು ಶೈಕ್ಷಣಿಕ ವಿಭಾಗದಲ್ಲಿ ಆಗಬೇಕಾಗಿರುವ ಬದಲಾವಣೆಗಳನ್ನು ವಿವರಿಸಿದರು. ಶಿಕ್ಷಕರು ಕೈಗಾರಿಕಾ ಕ್ಷೇತ್ರದ ಅವಶ್ಯಕತೆಗಳನ್ನು ಅರಿತು ಬೋಧಿಸುವಂತೆ ಸೂಚಿಸಿದರು. ಹೊಸ ಶಿಕ್ಷಣ ನೀತಿಯು ಶೈಕ್ಷಣಿಕ ಕ್ಷೇತ್ರದಲ್ಲಿ ನೂತನ ಬದಲಾವಣೆಗಳನ್ನು ತರಲಿದೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ. ವಿ. ಎ. ಕುಲಕರ್ಣಿ ಅವರು ಮಹಾವಿದ್ಯಾಲಯವು ಫಲಿತಾಂಶ ಆಧಾರಿತ ಶಿಕ್ಷಣ ವಿಧಾನವನ್ನು ಪರಿಣಾಮಕಾರಿಯಾಗಿ ಅಳವಡಿಸಿಕೊಂಡು ವಿದ್ಯಾರ್ಥಿಗಳ ಏಳಿಗೆಗೆ ಪಾತ್ರ ವಾಗುವುದೆಂದು ಹೇಳಿದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರು ಹಾಗೂ ಆವಿಷ್ಕಾರ ಪರಿಷತ್ತಿನ ಅಧ್ಯಕ್ಷರಾದ ಡಾ. ಮಹೇಂದ್ರ ದೀಕ್ಷಿತ್ ಅವರು ಸಂಪನ್ಮೂಲ ವ್ಯಕ್ತಿಗಳ ಕಿರುಪರಿಚಯಿಸುತ್ತ ಸಭಿಕರನ್ನು ಸ್ವಾಗತಿಸಿದರು. ಐ. ಕ್ಯೂ. ಎ. ಸಿ. ಸಂಚಾಲಕರಾದ ಡಾ. ವೆಂಕಟೇಶ ಶಂಕರ್ ವಂದಿಸಿದರು. ಪ್ರೊ. ಅವಿನಾಶ್ ಜೋಶಿ ನಿರೂಪಿಸಿದರು. ಕೇಂದ್ರ ಸರಕಾರದ ಮಾನವ ಸಂಪನ್ಮೂಲ ಇಲಾಖೆಯ: ಸಂಸ್ಥೆಗಳ ನಾವಿನ್ಯತಾ ಮಂಡಳಿ, ದೆಹಲಿ ಅಡಿಯಲ್ಲಿ ಆಯೋಜಿಸಲಾಗಿದ್ದ ಈ ಕಾರ್ಯಕ್ರಮದಲ್ಲಿ 50ಕ್ಕೂ ಅಧಿಕ ಬೋಧಕ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಪ್ರಾಂಶುಪಾಲರು

**Principal**
**KLS Vishwanathrao Deshpande Institute of Technology, Haliyal**


KLS VDIT, HALIYAL
Transforming through Technology
Orientation Session on
"SMART CO / PO in Engineering Curriculum"
23rd November 2022
Organized in association with Internal Quality Assurance Cell (IQAC)
INSTITUTION'S INNOVATION COUNCIL
Dr. U. P. Kulkarni,
Professor, Dept. of CSE,
NBA Co-ordinator, SDMCET, Dharwad
KLS
VDIT